ಉಪಾಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

3. ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕ 1996.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಸಚಿವರು):- ಮಾನ್ಯ ಉಪಾಧ್ಯಕ್ಷರೆ, 1996ರ ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ,

''1996ರ ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಸಚಿವರು):- ಮಾನ್ಯ ಉಪಾಧ್ಯಕ್ಷರೆ, 1996ರ ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ - II, III

ಶ್ರೀ ವೈ.ರಾಮಕೃಷ್ಣ (ಆನೇಕಲ್):- ಮಾನ್ಯ ಉಪಾಧ್ಯಕ್ಷರೆ, ಈ ಬಿಲ್‌ನಲ್ಲಿ ಒಂದು ಫೈನಾನ್ಸಿಯಲ್ ಸ್ಟೇಟ್‌ಮೆಂಟ್ ಇದೆ. Whether they have obtained the consent of the Governer. ಮಾನ್ಯ ರಾಜ್ಯಪಾಲರವರಿಂದ ಪರ್ಮಿಷನ್ ತೆಗೆದುಕೊಂಡಿದ್ದೀರೋ? ಆ ಬಿಲ್‌ನಲ್ಲಿ ಫೈನಾನ್ಸಿಯಲ್ ಇನ್‌ವಾಲ್ವ್‌ಮೆಂಟ್ ಇದೆ.

ಶ್ರೀ ರಮೇಶ್ ಸಿ.ಜಿಗಜಿಣಗಿ:- ಮಾನ್ಯ ಉಪಾಧ್ಯಕ್ಷರೆ, ಒಂದು ಟ್ರಸ್ಟ್ ಮಾಡಿ ಅದಕ್ಕೆ ಹ್ಯಾಂಡ್‌ಓವರ್ ಮಾಡಬೇಕೆನ್ನುವುದು ಅಷ್ಟೆ ಈ ಬಿಲ್‌ನಲ್ಲಿ ಇರುವುದು. ಹಿಂದೆ ಪರ್ಮಿಷನ್ ತೆಗೆದುಕೊಂಡು ಆಗಿದೆ.

SRI Y.RAMAKRISHNA:- Have you obtained the consent of the Governor? Because it is a financial bill.

SRI RAMESH JIGJINAGI:- Yes.